ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಅಡಿಕೆ ಮಂಡಳಿ ಸ್ಥಾಪನೆ ಹಾಗೂ ಅಡಿಕೆ ಬೆಳೆ ಸಮಸ್ಯೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

510 (741) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಲಕ್ಷಾಂತರ ಅಡಿಕೆ ಬೆಳೆಗಾರರು ಬಹು ಕಾಲದಿಂದ ನಿರೀಕ್ಷಿಸುತ್ತಿರುವ ಅಡಿಕೆ ಮಂಡಳಿ ಸ್ಥಾಪನೆ ಮಾಡುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಅಡಿಕೆ ಪವಿತ್ರ ಎನ್ನುವ ಭಾವನೆ ಜನತೆಯಲ್ಲಿದ್ದರೂ, ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ಅವೈಜ್ಞಾನಿಕ ವರದಿಯನ್ನು ಕೈಬಿಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು;

(ಇ) ಅಡಿಕೆಗೆ ಬರುವ ಕೊಳೆ, ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ;

(ಈ) ಕಳ್ಳಸಾಗಾಣಿಕೆ ಮೂಲಕ ವಿದೇಶಿ ಅಡಿಕೆ ಮಾರುಕಟ್ಟೆ ಪ್ರವೇಶಿಸುವುದನ್ನು ತಡೆಯಲು ಸರ್ಕಾರದ ಕ್ರಮವೇನು;

(ಉ) ಅಡಿಕೆ ದರ ಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು?